# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 222 (210) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 17/02/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು; ಕಾರ್ಮಿಕ ಇಲಾಖೆಯಲ್ಲಿ ನೋಂದಣಿಯಾಗಿರುವ ಹಾಗೂ ನೋಂದಣಿಯಾಗದಿರುವ ಕಾರ್ಮಿಕರ ಸಂಖ್ಯೆ ಎಷ್ಟು; ಬಾಕಿ ಉಳಿದಿರುವ ಕಾರ್ಮಿಕರ ನೋಂದಣಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು : | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಮಂಡಳಿಗಳಲ್ಲಿ ಫಲಾನುಭವಿಗಳ ನೋಂದಣಿಗೆ ಸಂಬಂಧಿಸಿದ ವಿವರ ಈ ಕೆಳಗಿನಂತಿದೆ;<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಇಲ್ಲಿಯವರೆಗೆ 28,94,389 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. ಮಂಡಳಿಯಲ್ಲಿ ನೋಂದಣಿಯಾಗದೇ ಇರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕುರಿತು ಮಂಡಳಿಯ ವತಿಯಿಂದ ಸಮೀಕ್ಷೆ ಕೈಗೊಂಡಿರುವುದಿಲ್ಲ.<br><br>ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಲು ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ:<br><br>ರಾಜ್ಯದಾದ್ಯಂತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಕ್ಷೇತ್ರ ಮಟ್ಟದಲ್ಲಿ ಬಳಕೆದಾರರ ಸ್ನೇಹಿ ಸೇವಾ ಸಿಂಧು ತಂತ್ರಾಂಶದ ಮೂಲಕ ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಲಾಗುತ್ತಿದೆ.<br><br>ಅಲ್ಲದೇ ಅವರಿಗೆ ನೋಂದಣಿ ಮತ್ತು ಸೌಲಭ್ಯಗಳ ಕುರಿತು ಮಾಹಿತಿ ಪಡೆಯಲು ಉಚಿತ ಸಹಾಯ ವಾಣಿ ಸಂಖ್ಯೆ: 155214 ಅನ್ನು ಸ್ಥಾಪಿಸಲಾಗಿದೆ.<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೋಂದಣಿ ಮತ್ತು ಸೌಲಭ್ಯಗಳ ಕುರಿಕು ಜಾಗೃತಿ ಮೂಡಿಸಲು ಈ ಕೆಳಕಂಡ ಐಇಸಿ ಚಟುವಟಿಕೆಗಳನ್ನು ರಾಜ್ಯಾದ್ಯಂತ ಕೈಗೊಳ್ಳಲಾಗಿದೆ: |

| | | |
|---|---|---|
| | | ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳಡಿಯಲ್ಲಿ ಬಸ್ ಬ್ರ್ಯಾಂಡಿಂಗ್, ಕೆ.ಎಸ್.ಆರ್.ಟಿ.ಸಿ ಬಸ್ ಸ್ಟ್ಯಾಂಡ್ ಆಡಿಯೋ ಅನೌನ್ಸ್‌ಮೆಂಟ್ಸ್, ಬಿ.ಎಂ.ಟಿ.ಸಿ ಬಸ್ ಸ್ಟ್ಯಾಂಡ್‌ಗಳಲ್ಲಿ ಎಲ್.ಇ.ಡಿಡಿಸ್ಪ್ಲೇ ಮೂಲಕ ಪ್ರಚಾರ, ಬಿ.ಬಿ.ಎಂ.ಪಿ ವ್ಯಾಪ್ತಿಯ ಬಸ್ ಶೆಲ್ಟರ್‌ಗಳ ಬ್ರ್ಯಾಂಡಿಂಗ್, ತಾಲ್ಲೂಕು ಕೇಂದ್ರಗಳಲ್ಲಿ ಗೋಡೆ ಬರಹದ ಮೂಲಕ ಪ್ರಚಾರ, ಸಾಮಾಜಿಕ ಮಾಧ್ಯಮ ಚಟುವಟಿಕೆ, ಜಿಲ್ಲಾಧಿಕಾರಿಗಳ ಕಛೇರಿ ಹಾಗೂ ಕಾರ್ಮಿಕ ಅಧಿಕಾರಿಗಳ ಕಛೇರಿಗಳಲ್ಲಿ ಸನ್ ಬೋರ್ಡ್ ಅಳವಡಿಕೆ, ಮಂಡಳಿಯ ಅಧೀನದಲ್ಲಿರುವ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧೀನದಲ್ಲಿರುವ ಹೋರ್ಡಿಂಗ್ ಪ್ಯಾನೆಲ್‌ಗಳಲ್ಲಿ ಹೋರ್ಡಿಂಗ್ ಅಳವಡಿಕೆ, ಬ್ಯಾನರ್ ಅಳವಡಿಕೆ, ಪೋಸ್ಟರ್ಸ್ ಅಳವಡಿಕೆ, ಮಂಡಳಿಯ ಸೌಲಭ್ಯಗಳ ಮಾಹಿತಿಯನ್ನೊಳಗೊಂಡ 2020–2021 ಮತ್ತು 2021–2022 ನೇ ಸಾಲಿನ ಕ್ಯಾಲೆಂಡರ್‌ಗಳ ಮುದ್ರಣ, ಪಾಂಪ್ಲೆಟ್ಸ್‌ಗಳ ಮುದ್ರಣ, ಪತ್ರಿಕೆಗಳಲ್ಲಿ ಮಾಹಿತಿ ಪ್ರಕಟಣೆ ಮುಂತಾದವುಗಳ ಮೂಲಕ ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಅಸಂಘಟಿತ ಕಾರ್ಮಿಕರ ಶ್ರೇಯೋಭಿವೃದ್ಧಿಯ ಪ್ರಮುಖ ಉದ್ದೇಶವನ್ನೊಳಗೊಂಡು ರಚಿತವಾಗಿದ್ದು, ಅಸಂಘಟಿತ ಕಾರ್ಮಿಕರ ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ಈವರೆಗೆ ಕಾರ್ಮಿಕ ಇಲಾಖೆ ವತಿಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ ಅಸಂಘಟಿತ ಕಾರ್ಮಿಕರ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ. ಆದರೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಹಾಗೂ ಕೋವಿಡ್–19 ಪರಿಹಾರಕ್ಕಾಗಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ಸಂಖ್ಯೆ ಲಭ್ಯವಿದ್ದು, ವಿವರ ಈ ಕೆಳಗಿನಂತಿದೆ:–<br><br><table><tr><th>ಯೋಜನೆಗಳು/ಕಾರ್ಯಕ್ರಮ</th><th>ನೋಂದಾಯಿತ ಕಾರ್ಮಿಕರ ಸಂಖ್ಯೆ</th></tr><tr><td>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ</td><td>8,40,561 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ)</td></tr><tr><td>ಅಂಬೇಡ್ಕರ್‌ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ</td><td>2,56,326</td></tr></table> |

<table>
<tr>
<td></td>
<td></td>
<td>

| | |
|---|---|
| ಕೋವಿಡ್-19ರ ವಿಶೇಷ ಪ್ಯಾಕೇಜ್ | 15,94,545 |
| ಇ-ಶ್ರಮ್ ಕಾರ್ಯಕ್ರಮದಡಿ ನೋಂದಣಿಯಾದ ಅಸಂಘಟಿತ ಕಾರ್ಮಿಕರು | 41,22,577 |
| ಒಟ್ಟು | **68,14,009** |

ನೋಂದಣಿಯಾಗದಿರುವ ಅಸಂಘಟಿತ ಕಾರ್ಮಿಕರ ಮಾಹಿತಿ ಮಂಡಳಿಯಲ್ಲಿ ಲಭ್ಯವಿರುವುದಿಲ್ಲ. ಬಾಕಿ ಉಳಿದಿರುವ ಅಸಂಘಟಿತ ಕಾರ್ಮಿಕರ ನೋಂದಣಿಗೆ ಮಂಡಳಿಯು ಈ ಕೆಳಕಂಡ ಸಂವಹನ ಚಟುವಟಿಕೆಗಳನ್ನು ಕೈಗೊಂಡಿದೆ.

- ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ, ಕಾರ್ಮಿಕ ಇಲಾಖೆಯ ಅಧಿಕಾರಿಗಳ ಸಹಕಾರದಿಂದ ಅರಿವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.
- ಕರಪತ್ರ, ಬ್ಯಾನರ್ಸ್ ಹಾಗೂ ಹೋರ್ಡಿಂಗ್ಸ್‌ಗಳ ಮೂಲಕ ಸಂವಹನ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ.
- ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತು ಕಾಲಕಾಲಕ್ಕೆ ವಾರ್ತಾ ಪತ್ರಿಕೆಗಳಲ್ಲಿ ಜಾಹೀರಾತು ಪ್ರಕಟಿಸಲಾಗುತ್ತಿದೆ.
- ಕಾರ್ಮಿಕ ಇಲಾಖೆ ಹಾಗೂ ಅದರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿ/ಸೊಸೈಟಿಗಳು ಜಾರಿಗೊಳಿಸುತ್ತಿರುವ ಯೋಜನೆಗಳಡಿ ದೊರೆಯುವ ಸೌಲಭ್ಯಗಳ ಬಗ್ಗೆ ಕುರಿತು ಮಾಹಿತಿ ನೀಡಲು ಹಾಗೂ ಸಹಾಯ ಒದಗಿಸಲು ರಾಜ್ಯದ ಬಹುತೇಕ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದೆ.

ಯೋಜನೆಗಳ ಕುರಿತಾಗಿ ಸಾರ್ವಜನಿಕರಿಗೆ ಸೂಕ್ತ ಮಾಹಿತಿ ಒದಗಿಸುವ ಸಲುವಾಗಿ ಉಚಿತ ಕಾರ್ಮಿಕ ಸಹಾಯವಾಣಿ 155214 (24*7)ನ್ನು ಸ್ಥಾಪಿಸಲಾಗಿದೆ.

</td>
</tr>
<tr>
<td>ಆ)</td>
<td>ಕಟ್ಟಡ ಕಾರ್ಮಿಕರ ಹಾಗೂ ಅಸಂಘಟಿತರ ಕಾರ್ಮಿಕರಿಗೆ ಇಲಾಖೆ ವತಿಯಿಂದ ನೀಡುತ್ತಿರುವ ವಿವಿಧ ಯೋಜನೆಗಳಾವುವು:</td>
<td>

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**

ಮಂಡಳಿಯ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗೆ ಮಂಡಳಿಯ ವತಿಯಿಂದ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-1ರಲ್ಲಿ** ಸಲ್ಲಿಸಿದೆ.

</td>
</tr>
</table>

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಕರ್ನಾಟಕ ಸರ್ಕಾರವು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದೆ.<br>**(1) <u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-</u>** ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಈ ಯೋಜನೆಯಡಿ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>(ಅ) **ಅಪಘಾತ ಪರಿಹಾರ ಸೌಲಭ್ಯ:-** ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ.5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br>(ಆ) **ಶೈಕ್ಷಣಿಕ ಧನ ಸಹಾಯ:-**ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯವರೆಗೆ ವಾರ್ಷಿಕ ತಲಾ ರೂ.10,000/-ರಂತೆ ಶೈಕ್ಷಣಿಕ ಧನಸಹಾಯ ನೀಡಲಾಗುತ್ತಿದೆ.<br>**(2) <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>** ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್‌ಕಾರ್ಡ್ ವಿತರಿಸಲಾಗುತ್ತಿದೆ. |
| ಇ) | ಯೋಜನೆಗಳನ್ನು ಪಡೆಯಲು ಅನುಸರಿಸಬೇಕಾದ ಕ್ರಮಗಳೇನು? | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಸೌಲಭ್ಯಗನ್ನು ಪಡೆಯಲು ಫಲಾನುಭವಿಯು ನೋಂದಾಯಿತ ಕ್ಷೇತ್ರ ಕಛೇರಿಗೆ ಸೇವಾ ಸಿಂಧು ತಂತ್ರಾಂಶದ ಮೂಲಕ ಸೌಲಭ್ಯಗಳಿಗೆ ನಿಗದಿಪಡಿಸದ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸಬೇಕು. ವಿವಿಧ ಸೌಲಭ್ಯಗಳಡಿ ಸಹಾಯ ಧನ ಪಡೆಯಲು ಫಲಾನುಭವಿಯು ಸಲ್ಲಿಸಬೇಕಾದ ದಾಖಲೆಗಳ ವಿವರವನ್ನು <u>**ಅನುಬಂಧ-02**</u> ರಲ್ಲಿ ಸಲ್ಲಿಸಿದೆ. |

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಸೌಲಭ್ಯವನ್ನು ಪಡೆಯಲು ಅನುಸರಿಸಬೇಕಾದ ಕ್ರಮಗಳು ಈ ಕೆಳಕಂಡಂತಿದೆ:

**(1)ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**

**(ಅ) ಅಪಘಾತ ಪರಿಹಾರ ಸೌಲಭ್ಯ :**

ಖಾಸಗಿ ವಾಣಿಜ್ಯ ಸಾರಿಗೆ ಚಾಲಕರು ಅಪಘಾತಕ್ಕೀಡಾದಲ್ಲಿ ಅನುಸರಿಸಬೇಕಾದ ಕ್ರಮಗಳು:-

- ಪರಿಹಾರ ಮೊತ್ತವನ್ನು ಪಡೆಯಲು ಅಪಘಾತ ಸಂಭವಿಸಿದ ಒಂದು(1) ವರ್ಷದ ಒಳಗೆ ಮಂಡಳಿಗೆ ಫಲಾನುಭವಿ/ನಾಮನಿರ್ದೇಶಿತರು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು.
- ಅಪಘಾತ ಪರಿಹಾರ ಪಡೆಯಲು, ಫಲಾನುಭವಿಯ ನಾಮ ನಿರ್ದೇಶಿತರು ಕ್ಲೇಮ್ ಅರ್ಜಿಯ ಜೊತೆಗೆ ಮರಣ ಪ್ರಮಾಣ ಪತ್ರ, ಮರಣೋತ್ತರ ಪರೀಕ್ಷಾ ವರದಿ, ಪ್ರಥಮ ಮಾಹಿತಿ ವರದಿ(FIR) ಮತ್ತು ಊರ್ಜಿತ ಚಾಲನಾ ಪರವಾನಗಿ, ವೈದ್ಯಕೀಯ ಪ್ರಮಾಣ ಪತ್ರ/ಬಿಲ್‌ಗಳ ಮೂಲ ಪ್ರತಿಗಳನ್ನು ಕಡ್ಡಾಯವಾಗಿ ಲಗತ್ತಿಸಿ ಸಲ್ಲಿಸಬೇಕು.
- ಸ್ವೀಕರಿಸಿದ ಕ್ಲೇಮ್ ಅರ್ಜಿಯ ದಾಖಲೆಗಳನ್ನು ಪರಿಶೀಲಿಸಿ ಅರ್ಹರಿದ್ದಲ್ಲಿ, ಪರಿಹಾರದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

**(ಆ) ಶೈಕ್ಷಣಿಕ ಧನಸಹಾಯ ಪಡೆಯಲು ಅನುಸರಿಸಬೇಕಾದ ಕ್ರಮಗಳು:**

- ಶೈಕ್ಷಣಿಕ ಧನ ಸಹಾಯದ ಅರ್ಜಿಗಳನ್ನು ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮುಖಾಂತರ ಅಥವಾ ನೇರವಾಗಿ ಮಂಡಳಿಗೆ ಸಲ್ಲಿಸಬಹುದು.
- ಸದರಿ ಅರ್ಜಿಗಳನ್ನು ಪರಿಶೀಲಿಸಿ ಧನ ಸಹಾಯದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

| | | |
|---|---|---|
| | | (2) <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ</u> **ನೋಂದಾಯಿಸಿಕೊಳ್ಳಲು ಅನುಸರಿಸಬೇಕಾದ ಕ್ರಮಗಳು:**<br>• ಮಂಡಳಿಯ www.ksuwssb.karnataka.gov.in ಪೋರ್ಟಲ್ ನಿಗದಿತ ಅರ್ಜಿ ನಮೂನೆಯಲ್ಲಿ ಈ ಕೆಳಕಂಡ ಅಗತ್ಯ ದಾಖಲೆಗಳೊಂದಿಗೆ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡುವುದು.<br>• ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ, ವಯಸ್ಸಿನ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯನ್ನು ಅಪ್‌ಲೋಡ್ ಮಾಡುವುದು.<br>• ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆ.<br>• ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕ್‌ನ ಹೆಸರು ಹಾಗೂ ಶಾಖೆ ವಿಳಾಸ, ಐ.ಎಫ್.ಎಸ್.ಸಿ ಕೋಡ್ ವಿವರಗಳು ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ವಿವರ ಪುಟವನ್ನು ಅಪ್‌ಲೋಡ್ ಮಾಡುವುದು. |

**ಕಾಇ 68 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

## ಅನುಬಂಧ-01

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ್ ಕೆ. ರಾಠೋಡ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 210**

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಕಲ್ಯಾಣ ಮತ್ತು ಸಾಮಾಜಿಕ ಮತ್ತು ಭದ್ರತಾ ಸೌಲಭ್ಯಗಳು**

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ ರೂ.2,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆಅನುಗ್ರಹ ರಾಶಿ ಸಹಾಯಧನ.
4. ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ ಮರುಪಾವತಿ ಸೌಲಭ್ಯ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ
6. ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ: ನೋಂದಾಯಿತ ಫಲಾನುಭವಿಯಅವಲಂಭಿತರಿಗೆ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/- ದವರೆಗೆ ಮುಂಗಡ ಸೌಲಭ್ಯ
8. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. 30,000/- ಮತ್ತುಗಂಡು ಮಗುವಿನ ಜನನಕ್ಕೆರೂ.20,000/-
9. ಶಿಶು ಪಾಲನಾ ಸೌಲಭ್ಯ:
10. ಅಂತ್ಯಕ್ರಿಯೆವೆಚ್ಚ :ರೂ.4,000/- ಹಾಗೂ ಅನುಗ್ರಹ ರಾಶಿ ರೂ.50,000/-ಸಹಾಯಧನ
11. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |

| | | |
|---|---|---|
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು |
| ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ<br>ಕೋರ್ಸ್‌ನ ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧ ಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000<br>(ಯೂಜಿಸಿಯ<br>ಜೂನಿಯರ್ ರಿಸರ್ಚ್ ಪೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಆಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಭಿತರಿಗೆರೂ.300/- ರಿಂದರೂ.10,000/-ವರೆಗೆ
13. ಅಪಘಾತ ಪರಿಹಾರ: ಮರಣ ಹೊಂದಿದ್ದಲ್ಲಿರೂ.5,00,000/-, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ ರೂ.2,00,000/- ಮತ್ತುಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ ರೂ.1,00,000/-
14. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ): ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ
15. ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್): ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ ರೂ.50,000/-
16. ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪಾರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತುಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲುತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.
17. ಬಿಎಂಟಿಸಿ ಬಸ್ ಪಾಸ್ ಸೌಲಭ್ಯ: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡಕಾರ್ಮಿಕರಿಗೆ
18. ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತಕಾರ್ಮಿಕರಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. ತಾಯಿ ಮಗು ಸಹಾಯ ಹಸ್ತ: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕರೂ.6,000/- ಗಳ ಸಹಾಯಧನ.

# ಅನುಬಂಧ-2

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ್ ಕೆ. ರಾಠೋಡ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 210

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಸೌಲಭ್ಯಗಳನ್ನು ಪಡೆಯಲು ಫಲಾನುಭವಿಗಳು ಸಲ್ಲಿಸಬೇಕಾದ ದಾಖಲೆಗಳು:

ನಿಯಮ 39: ಪಿಂಚಣಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದದೃಢೀಕರಣ ಪತ್ರ.
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ನೋಂದಣಿಯಾಗಿ ಕನಿಷ್ಠ 3 ವರ್ಷ ಸದಸ್ಯತ್ವವನ್ನು ಪೂರ್ಣಗೊಳಿಸಿದ ನಂತರ 60 ವರ್ಷ ವಯಸ್ಸಾಗಿರಬೇಕು.
- ಸರ್ಕಾರದ ವಿವಿಧಯೋಜನೆ ಯಡಿಯಲ್ಲಿ ಈ ಸೌಲಭ್ಯ ಪಡೆಯತ್ತಿರಬಾರದು.
- ಜೀವಿತ ಪ್ರಮಾಣ ಪತ್ರ ಸಲ್ಲಿಸುವುದು.
- ಫಲಾನುಭವಿಯ ಆಧಾರ್‌ಕಾರ್ಡ್/ರೇಷನ್‌ಕಾರ್ಡ್ ಸಲ್ಲಿಸುವುದು.

ನಿಯಮ 40: ದುರ್ಬಲತೆ ಪಿಂಚಣಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ.
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಶಾಶ್ವತ ದುರ್ಬಲತೆಯಾಗಿರುವುದಕ್ಕೆ ಕಟ್ಟಡ ಕಾರ್ಮಿಕನ ಭಾವಚಿತ್ರ (ಫೋಟೋ).
- ದುರ್ಬಲತೆ ಗುರುತಿನ ಚೀಟಿ ಪಡೆದ ನಂತರ 6 ತಿಂಗಳೊಳಗಾಗಿ ಅರ್ಜಿ ಸಲ್ಲಿಸಬೇಕು.
- ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಪಘಾತ ಉಂಟಾಗಿ ಅದರಿಂದ ದುರ್ಬಲತೆಯಾಗಿರಬೇಕು.
- ಫಲಾನುಭವಿಗೆ ದುರ್ಬಲತೆಯಾಗಿರುವುದಕ್ಕೆ ಹಿರಿಯ ನಾಗರಿಕರ ಹಾಗೂ ಅಂಗವಿಕಲ ಸಬಲೀಕರಣ ಇಲಾಖೆ ಇವರಿಂದ ಪಡೆದ ಅಂಗವಿಕಲ ಗುರುತಿನ ಚೀಟಿಯ ಪ್ರತಿಯನ್ನು ಲಗತ್ತಿಸಬೇಕು.
- ಫಲಾನುಭವಿಯ ಆಧಾರ್‌ಕಾರ್ಡ್/ರೇಷನ್‌ಕಾರ್ಡ್ ಸಲ್ಲಿಸುವುದು.

**ನಿಯಮ 39(ಎ): ಕುಟುಂಬ ಪಿಂಚಣಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-12(ಎ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಅರ್ಜಿದಾರರಕೋರಿಕೆ ಪತ್ರ
- ಮೃತ ಪಿಂಚಣಿದಾರರ ಮರಣ ಪ್ರಮಾಣ ಪತ್ರ ಸಲ್ಲಿಸುವುದು.
- ನಾಮನಿರ್ದೇಶಿತರು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಪಿಂಚಣಿದಾರರು ಮಂಡಳಿಯಿಂದ ಪಿಂಚಣಿ ಪಡೆಯುತ್ತಿರುವ ಅವಧಿಯಲ್ಲಿ ಮರಣ ಹೊಂದಿದರೆ ಮಾತ್ರ ಕುಟುಂಬ ಪಿಂಚಣಿ ಪಡೆಯಲು ಅವಕಾಶವಿರುತ್ತದೆ.
- ನಾಮನಿರ್ದೇಶಿತರ ಆಧಾರ್‌ಕಾರ್ಡ್/ರೇಷನ್‌ಕಾರ್ಡ್ ಸಲ್ಲಿಸುವುದು.

**ನಿಯಮ 41: ಶ್ರಮ ಸಾಮರ್ಥ್ಯ ಟೂಲ್‌ಕಿಟ್ ವಿತ್ ಟ್ರೈನಿಂಗ್ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-15ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದದೃಢೀಕರಣ ಪತ್ರ
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾನುಭವಿಯ ಸದಸ್ಯತ್ವ ಅವಧಿಯಲ್ಲಿ ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ಪಡೆದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
- ಫಲಾನುಭವಿಯು ತರಬೇತಿ ಪಡೆಯಲು 55 ವರ್ಷ ವಯಸ್ಸಿನ ಒಳಗಿರಬೇಕು.

**ನಿಯಮ 42: ಮನೆ ಖರೀದಿ ಅಥವಾ ನಿರ್ಮಾಣಕ್ಕಾಗಿ (ಕಾರ್ಮಿಕ ಗೃಹ ಭಾಗ್ಯ) ನೀಡುವ ಸೌಲಭ್ಯಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-16 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ
- ಅರ್ಜಿ ಸಲ್ಲಿಸುವ ಫಲಾನುಭವಿಗೆ ಕನಿಷ್ಠ 45 ವರ್ಷ ವಯಸ್ಸಾಗಿರಬೇಕು
- ಸರ್ಕಾರದಿಂದ ಯಾವುದಾದರೂ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ಸಾಲ ಮಂಜೂರಾಗಿರಬೇಕು
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್‌ಬುಕ್‌ನ ಪ್ರತಿ ಸಲ್ಲಿಸುವುದು

ನಿಯಮ 43: ಹೆರಿಗೆ ಸಹಾಯ ಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ನಮೂನೆ-17ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ನೋಂದಾಯಿತ ಮಹಿಳಾ ಫಲಾನುಭವಿಯು ತನ್ನ ಮೊದಲ 2 ಹೆರಿಗೆಗಳಿಗೆ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾಳೆ. (ಕೇವಲ ಎರಡುಜೀವಂತ ಮಕ್ಕಳಿದ್ದಾರೆ ಎನ್ನುವುದನ್ನು ಖಚಿತ ಪಡಿಸಿಕೊಳ್ಳಬೇಕು.)
- ಇದು ಎರಡನೇ ಹೆರಿಗೆಎಂದು ಅಫಿಡೆವಿಟ್ ಸಲ್ಲಿಸಬೇಕು.
- ಜನನ ಮತ್ತು ಮರಣ ಪ್ರಮಾಣ ನೊಂದಣಾಧಿಕಾರಿಗಳಿಂದ ಪಡೆದ ಜನನ ಪ್ರಮಾಣ ಪತ್ರ ಸಲ್ಲಿಸಬೇಕು.
- ಹೆರಿಗೆಯಾದ 6 ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು.

ನಿಯಮ 43-ಎ: ಪೂರ್ವ ಪ್ರಾಥಮಿಕ ಶಿಕ್ಷಣ ಹಾಗೂ ಪೌಷ್ಠಿಕಾಂಶಗಳನ್ನು ಮಹಿಳಾ ಫಲಾನುಭವಿಯು ಮೊದಲ ಎರಡು ಮಕ್ಕಳಿಗಾಗಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್. (ತಾಯಿ ಮಗು ಸಹಾಯ ಹಸ್ತ)

- ನಮೂನೆ-17-ಎ ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ನೋಂದಾಯಿತ ಮಹಿಳಾ ಫಲಾನುಭವಿಯು ತನ್ನ ಮೊದಲ ಎರಡು ಹೆರಿಗೆಗಳಿಗೆ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾಳೆ.
- ಎರಡನೇ ಹೆರಿಗೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಫಿಡೆವಿಟ್ ಸಲ್ಲಿಸಬೇಕು.
- ಜನನ ಮತ್ತು ಮರಣ ಪ್ರಮಾಣ ಅಧಿಕಾರಿಗಳಿಂದ ಜನನ ಪ್ರಮಾಣ ಪತ್ರ ಸಲ್ಲಿಸಬೇಕು.
- ಹೆರಿಗೆಯಾದ 6 ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು

ನಿಯಮ 44:ಅಂತ್ಯಕ್ರಿಯೆ ಸಂಸ್ಕಾರ ಮತ್ತು ಅನುಗ್ರಹರಾಶಿ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ನಮೂನೆ-18ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಮೃತ ಫಲಾನುಭವಿಯ ಮೂಲ / ದೃಢೀಕೃತ ಮರಣ ಪ್ರಮಾಣ ಪತ್ರವನ್ನು ಲಗತ್ತಿಸಬೇಕು.

- ಮೃತ ಫಲಾನುಭವಿಯ ವಯಸ್ಸು 60 ವರ್ಷ ಮೀರದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
- ಅರ್ಜಿದಾರನನ್ನು ಮೃತ ಫಲಾನುಭವಿಯ ನಾಮನಿರ್ದೇಶಿತನಾಗಿ ನೋಂದಾಯಿಸಲಾಗಿದೆಯೇ ಎಂದು ಖಚಿತ ಪಡಿಸಿಕೊಳ್ಳಬೇಕು.
- ಫಲಾನುಭವಿಯು ಮೃತನಾದಒಂದು ವರ್ಷದೊಳಗೆ ಅರ್ಜಿಯನ್ನು ಸಲ್ಲಿಸಬೇಕು.

ನಿಯಮ 45: ಶೈಕ್ಷಣಿಕ ಸಹಾಯಧನಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ನಮೂನೆ-19 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ
- ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾಭವಿಯ ಮಗ / ಮಗಳು ಉತ್ತೀರ್ಣ ಆಗಿರುವ ಕುರಿತು ಅಂಕಪಟ್ಟಿ ಹಾಗೂ ವ್ಯಾಸಂಗ ಮಾಡುತ್ತಿರುವ
- ಸಂಸ್ಥೆಯ ಮುಖ್ಯಸ್ಥರಿಂದ ವ್ಯಾಸಂಗ ಮೂಲ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಫಲಾನುಭವಿಯ ಪ್ರಸ್ತುತ ಅರ್ಜಿಯು ಈ ಹಿಂದೆ ಶೈಕ್ಷಣಿಕ ಸಹಾಯಧನ ಪಡೆದ ಇಬ್ಬರು ಮಕ್ಕಳಿಗೆ ಅನ್ವಯಿಸಲಾಗಿದೆಯೇ ಎಂದು ಖಾತ್ರಿ ಪಡಿಸಿಕೊಳ್ಳಬೇಕು.
- ಶೈಕ್ಷಣಿಕ ಸಹಾಯಧನ ಅರ್ಜಿಯನ್ನು ಶೈಕ್ಷಣಿಕ ವರ್ಷ ಪ್ರಾರಂಭವಾದ ದಿನದಿಂದ 6 ತಿಂಗಳ ಒಳಗೆ ಸಲ್ಲಿಸಬೇಕು.

ನಿಯಮ 46: ಒಳರೋಗಿ ವೈದ್ಯಕೀಯ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ನಮೂನೆ-20 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾನುಭವಿಯು ಆಸ್ಪತ್ರೆಯಲ್ಲಿ ದಾಖಲಾದ ದಿನಾಂಕ ಹಾಗೂ ಬಿಡುಗಡೆಯಾದ ದಿನಾಂಕ ವಿವರಗಳನ್ನು ನಮೂದಿಸಬೇಕು.
- ಫಲಾನುಭವಿಯು ಸರ್ಕಾರಿ / ಸರ್ಕಾರದಿಂದ ಮಾನ್ಯತೆ ಪಡೆದ (ಶೆಡ್ಯೂಲ್ 1ಗೆ ಸೇರಿದ) ಖಾಸಗಿ ಆಸ್ಪತ್ರೆಗಳಲ್ಲಿ ಕನಿಷ್ಠ ಎರಡು ದಿನ ಒಳರೋಗಿಯಾಗಿ ದಾಖಲಾಗಿರುವ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಆಸ್ಪತ್ರೆಗೆದಾಖಲಾದ ದಿನಾಂಕದಿಂದ 6 ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು

**ನಿಯಮ 47:ಅಪಘಾತ ಮರಣ, ಶಾಶ್ವತ ಸಂಪೂರ್ಣ / ಭಾಗಶಃದುರ್ಬಲತೆ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.**

- ನಮೂನೆ-21ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನಚೀಟಿ / ಸ್ಮಾರ್ಟ್‌ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ದೃಢೀಕೃತ ಮರಣ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಅಪಘಾತದ ಸ್ವರೂಪವನ್ನು ನಮೂದಿಸಬೇಕು.
- ದುರ್ಬಲತೆ ಪ್ರಕರಣವಿದ್ದಲ್ಲಿ, ಅಪಘಾತದ ಪರಿಣಾಮವಾಗಿರುವ ಶಾಶ್ವತ-ಸಂಪೂರ್ಣ (ಪ್ರತಿಶತಃ 100ರಷ್ಟು) ಅಥವಾ ಶಾಶ್ವತ-ಭಾಗಶಃ (ಪ್ರತಿ ಶತಃ 100ಕ್ಕಿಂತ ಕಡಿಮೆ) ದುರ್ಬಲತೆಯಾದ ಬಗ್ಗೆ ಹಾಗೂ ದುರ್ಬಲತೆಯ ಶೇಕಡವಾರು ಪ್ರಮಾಣ ನಮೂದಿಸಬೇಕು.
- ಫಲಾನುಭವಿಗೆ ದುರ್ಬಲತೆಯಾದ ನಂತರ ತಪಾಸಣೆ ಮಾಡಿದ ಸರ್ಕಾರಿ / ಸರ್ಕಾರದ ಮಾನ್ಯತೆ ಪಡೆದ ಖಾಸಗಿ ಆಸ್ಪತ್ರೆ ವೈದ್ಯರಿಂದ ಶೇಕಡವಾರು ದುರ್ಬಲತೆ ಖಚಿತ ಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಲಗತ್ತಿಸುವುದು.
- ನಮೂನೆ 21ಎ ನಲ್ಲಿ ನಿಯೋಜಕರಿಂದ ಪಡೆದ ವರದಿಯನ್ನು ಸಲ್ಲಿಸಬೇಕು.
- ಅಪಘಾತ ಸಂಭವಿಸಿದ ಒಂದು ವರ್ಷದೊಳಗೆ ಅರ್ಜಿಯನ್ನು ಸಲ್ಲಿಸಬೇಕು.

**ನಿಯಮ 48: ಪ್ರಮುಖ ವೈದ್ಯಕೀಯ ವೆಚ್ಚ (ಕಾರ್ಮಿಕಚಿಕಿತ್ಸಾ ವೆಚ್ಚ) ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-22 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ
- ನಮೂನೆ-22 (ಎ)ರಲ್ಲಿ ಚಿಕಿತ್ಸೆ ನೀಡಿದ ವೈದ್ಯರಿಂದ ಮಾಹಿತಿಯನ್ನು ಭರ್ತಿ ಮಾಡಿ ಸಲ್ಲಿಸುವುದು
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್‌ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಸರ್ಕಾರಿ/ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಆಸ್ಪತ್ರೆ/ಆರ್.ಎಸ್.ಬಿ.ವೈ. ಯೋಜನೆಯಿಂದ ಮಾನ್ಯತೆ ಪಡೆದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿರಬೇಕು.
- ಆಸ್ಪತ್ರೆಯಿಂದ ಬಿಡುಗಡೆಯಾದ 6 ತಿಂಗಳೊಳಗಾಗಿ ಅರ್ಜಿ ಸಲ್ಲಿಸಬೇಕು
- ಚಿಕಿತ್ಸೆ ಪಡೆದ ಮೂಲ ವೈದ್ಯಕೀಯ ದಾಖಲೆಗಳನ್ನು ಮತ್ತು ಬಿಲ್ಲುಗಳನ್ನು ಸಲ್ಲಿಸುವುದು
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್‌ಬುಕ್‌ನ ಪ್ರತಿ ಸಲ್ಲಿಸುವುದು

**ನಿಯಮ 49: ಮದುವೆ ಸಹಾಯಧನ (ಗೃಹಲಕ್ಷ್ಮೀ ಬಾಂಡ್) ಸೌಲಭ್ಯಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ–23 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನಚೀಟಿ/ಸ್ಮಾರ್ಟ್‌ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ನೋಂದಣಿಯಾಗಿ ಒಂದು ವರ್ಷ ಪೂರೈಯಿಸಿದ ನಂತರ ಫಲಾನುಭವಿ/ಮಕ್ಕಳಿಗೆ ಮದುವೆಯಾಗಿರಬೇಕು
- ಮದುವೆಯಾದ 6 ತಿಂಗಳ ಒಳಗಾಗಿ ಅರ್ಜಿ ಸಲ್ಲಿಸಬೇಕು
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್‌ಬುಕ್‌ನ ಪ್ರತಿ ಸಲ್ಲಿಸುವುದು

**ನಿಯಮ 49(ಅ): ಕಾರ್ಮಿಕ ಅನಿಲ ಭಾಗ್ಯ ಸೌಲಭ್ಯ (ಎಲ್‌ಪಿಜಿ) ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್**

- ನಮೂನೆ–23 (ಎ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್‌ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಫಲಾನುಭವಿಯ ಕುಟುಂಬದ ಒಬ್ಬ ಸದಸ್ಯರು ಮಾತ್ರ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ.
- ಆಧಾರ್‌ಕಾರ್ಡ್, ಪಡಿತರಚೀಟಿ ಮತ್ತು ನೋಟರಿಯಿಂದ ಪಡೆದ ಅಫಿಡೆವಿಟ್ ಅಥವಾ ಆಹಾರ ನಿರೀಕ್ಷಕರಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

**ನಿಯಮ 49(ಇ): ಬಿ.ಎಂ.ಟಿ.ಸಿ. ಬಸ್ ಪಾಸ್‌ಸೌಲಭ್ಯಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ–23 (ಬಿ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನಚೀಟಿ/ಸ್ಮಾರ್ಟ್‌ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಖಾಯಂ ವಿಳಾಸ ಹೊಂದಿರುವ ಫಲಾನುಭವಿಯಾಗಿರಬೇಕು
- ಆಧಾರ್ ಕಾರ್ಡ್ ಮತ್ತು ಪಡಿತರಚೀಟಿ ಪ್ರತಿ ಸಲ್ಲಿಸುವುದು.
- ಬಿಎಂಟಿಸಿ ಸಂಸ್ಥೆ ನೀಡುವ ಬಸ್ ಪಾಸ್‌ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸುವುದು.

**ನಿಯಮ (ಈ): ಕೆ.ಎಸ್.ಆರ್.ಟಿ.ಸಿ. ಬಸ್‌ಪಾಸ್ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ–23 (ಸಿ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನಚೀಟಿ/ಸ್ಮಾರ್ಟ್‌ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಫಲಾನುಭವಿಯ ಇಬ್ಬರು ಮಕ್ಕಳಿಗೆ ಮಾತ್ರ ಖಾಯಂ ವಿಳಾಸದಿಂದ ವಿದ್ಯಾ ಸಂಸ್ಥೆಯವರೆಗೆ ಕೆ.ಎಸ್.ಆರ್.ಟಿ.ಸಿ. ಬಸ್‌ಪಾಸ್ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ.
- ಆಧಾರ್ ಕಾರ್ಡ್ ಮತ್ತು ಪಡಿತರ ಚೀಟಿ ಪ್ರತಿ ಸಲ್ಲಿಸುವುದು.
- ಕೆ.ಎಸ್.ಆರ್.ಟಿ.ಸಿ.ಸಂಸ್ಥೆ ನೀಡುವ ಬಸ್ ಪಾಸ್ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸುವುದು.